ಕರ್ನಾಟಕ ಸರ್ಕಾರ

**ಕಾಲೇಜು ಶಿಕ್ಷಣ ಇಲಾಖೆ**

{ಆಯುಕ್ತರ ಕಛೇರಿ, ಉನ್ನತ ಶಿಕ್ಷಣ ಸೌಧ, ಕಾಲೇಜು ಶಿಕ್ಷಣ ಇಲಾಖೆ, ಶೇಷಾದ್ರಿ ರಸ್ತೆ, ಬೆಂಗಳೂರು-560001}

ಸಂಖ್ಯೆ:ಕಾಶಿಇ/ನೇವಿ-1/ಅಉಅ/97/2021-22 ದಿನಾಂಕ:21.12.2022.

**ಸುತ್ತೋಲೆ**

ವಿಷಯ: 2021-22ನೇ ಸಾಲಿನಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರ ಸೇವಾ ಅವದಿ ವಿಸ್ತರಣೆ ಬಗ್ಗೆ.

ಉಲ್ಲೇಖ: ಸರ್ಕಾರದ ಪತ್ರ ಸಂಖ್ಯೆ:ಇಡಿ 305 ಡಿಸಿಇ 2022 (ಇ), ದಿನಾಂಕ:07.12.2022

*****

2021-22 ನೇ ಸಾಲಿನಲ್ಲಿ ಆಯ್ಕೆಯಾಗಿ ಕರ್ತವ್ಯನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರ ಸೇವಾ ಅವಧಿಯನ್ನು ಶೈಕ್ಷಣಿಕ ಹಿತದೃಷ್ಟಿಯಿಂದ ಡಿಸೆಂಬರ್ 2022 ರ ಅಂತ್ಯದವರೆಗೆ ವಿಸ್ತರಿಸಲು ಸರ್ಕಾರದ ಅನುಮೋದನೆ ನೀಡಲಾಗಿದೆ ಹಾಗೂ ಅತಿಥಿ ಉಪನ್ಯಾಸಕರುಗಳಿಗೆ ಪರೀಕ್ಷಾ ಕೆಲಸಕ್ಕೆ ಹಾಜರಾಗಲು ಒಂದು ಸೆಮಿಸ್ಟರ್‌ನಲ್ಲಿ 5 ದಿನಗಳಂತೆ ಅವಕಾಶ ನೀಡಲು ಉಲ್ಲೇಖಿತ ಸರ್ಕಾರದ ಪತ್ರದಲ್ಲಿ ಸೂಚಿಸಲಾಗಿದೆ.

ಈ ಹಿನ್ನೆಲೆಯಲ್ಲಿ, ಈ ಕಛೇರಿಯ ಸಮ ಸಂಖ್ಯೆ ಸುತ್ತೋಲೆ ದಿನಾಂಕ:28.01.2022 ರನ್ವಯ ವಿವಿಧ ದಿನಾಂಕಗಳಂದು ಆನ್‌ಲೈನ್ ಕೌನ್ಸಿಲಿಂಗ್ ಮೂಲಕ ಆಯ್ಕೆಗೊಂಡು ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಕರ್ತವ್ಯನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರುಗಳ ಸೇವಾ ಅವಧಿಯನ್ನು ಡಿಸೆಂಬರ್ 2022 ರ ಅಂತ್ಯದವರೆಗೆ ವಿಸ್ತರಿಸಲಾಗಿದೆ. ಮುಂದುವರೆದು, ಅತಿಥಿ ಉಪನ್ಯಾಸಕರುಗಳಿಗೆ ಪರೀಕ್ಷಾ ಕೆಲಸಕ್ಕೆ ಹಾಜರಾಗಲು ಒಂದು ಸೆಮಿಸ್ಟರ್‌ನಲ್ಲಿ 5 ದಿನಗಳಂತೆ ಅವಕಾಶವನ್ನು ನೀಡಲು ಸೂಚಿಸಲಾಗಿದೆ.

ತಮ್ಮ ವಿಶ್ವಾಸಿ,

**ಮುಖ್ಯ ಆಡಳಿತಾಧಿಕಾರಿಗಳು**
**ಕಾಲೇಜು ಶಿಕ್ಷಣ ಇಲಾಖೆ**

**ಇವರಿಗೆ,**

1. ಎಲ್ಲಾ ಪ್ರಾದೇಶಿಕ ಜಂಟಿ ನಿರ್ದೇಶಕರುಗಳಿಗೆ - ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ
2. ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ-ಮಾಹಿತಿಗಾಗಿ.

ಪ್ರತಿಯನ್ನು:

1. ಮ್ಯಾನೇಜರ್/ಅಧೀಕ್ಷಕರು, ಯೋಜನೆ & ಆಯವ್ಯಯ ವಿಭಾಗ, ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ಬೆಂಗಳೂರು.
2. ಕಛೇರಿ ಪ್ರತಿ.

D:\BRIJESH\Guest Faculty\97\97.Guest Faculty December Extention.docx